ವಿದ್ಯಾರ್ಥಿಗಳ ಹಾಸ್ಟೆಲ್ ನಿರ್ಮಾಣ.

3441(4322) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಗಳೂರಿನಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಹಾಗೂ ಪರಿಶಿಷ್ಟ ವಿದ್ಯಾರ್ಥಿ ಹಾಸ್ಟೆಲ್ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಆ) ಉರ್ವಾವೇಲ್ಸ್‌ಪೇಟೆಯ ಪರಿಶಿಷ್ಟ ವಿದ್ಯಾರ್ಥಿ ಹಾಸ್ಟೆಲ್‌ಗೆ ಖರ್ಚು ಮಾಡಿದ ಹಣ ಎಷ್ಟು?

ಇ) ಸದರಿ ಹಾಸ್ಟೆಲ್ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :—

ಅ) 2000-2001 ನೇ ಸಾಲಿನಲ್ಲಿ ಮಂಗಳೂರು ನಗರದ ಬಲ್ಮಠದಲ್ಲಿ ಒಂದು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯ ಪ್ರಾರಂಭಿಸುವ ಪ್ರಸ್ತಾಪ ಇರುವುದಿಲ್ಲ.

ಆ) ಉರ್ವಾವೇಲ್ಸ್ ಪೇಟೆಯಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿ ನಿಲಯವನ್ನು ಶೇ. 18ರ ಹಣದಲ್ಲಿ ಕಟ್ಟಲು ಉದ್ದೇಶಿಸಿದ್ದು 87.40 ಲಕ್ಷ ರೂ.ಗಳ ಅಂದಾಜು ನಕ್ಷೆಗೆ ನಗರಾಭಿವೃದ್ಧಿ ಇಲಾಖೆ ದಿನಾಂಕ 7-8-81 ರಲ್ಲಿ ಮಂಜೂರಾತಿ ನೀಡಿದೆ. ಇಲ್ಲಿಯವರೆಗೆ ರೂ. 27.85 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

ಇ) ಹೌದು

ಈ) ಅಪೂರ್ಣಗೊಂಡಿರುವ ಕಟ್ಟಡವನ್ನು ಪೂರ್ಣಗೊಳಿಸಲು ಲೋಕೋಪಯೋಗಿ ಇಲಾಖೆಯು ಪುನಃ 14.00ಲಕ್ಷ ರೂ.ಗಳ ಅಂದಾಜು ನಕ್ಷೆಯನ್ನು ತಯಾರಿಸಿದ್ದು ದಿನಾಂಕ 22-4-98ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ಸಮಾಜ ಕಲ್ಯಾಣ ಇಲಾಖೆಯು ನೀಡಿರುತ್ತದೆ. ರೂ. 8.32 ಲಕ್ಷ ರೂ.ಗಳನ್ನು ಸಮಾಜ ಕಲ್ಯಾಣ ಇಲಾಖೆಯು ಜಿಲ್ಲಾ ಪಂಚಾಯತ್‌ಗೆ ದಿನಾಂಕ: 5-6-98ರಲ್ಲಿ ಬಿಡುಗಡೆ ಮಾಡಿತ್ತು. ಇದರ ಜೊತೆಗೆ ಶೇ.

18ರ ಇಲಾಖೆಯಲ್ಲಿ ಬಾಕಿ ಉಳಿದಿರುತ್ತದೆ. ತಾಂತ್ರಿಕ ಪರಿಶೀಲನೆಯಿಂದ ಈ ಕಟ್ಟಡವನ್ನು ಪೂರ್ಣಗೊಳಿಸಲು ಸಾಧ್ಯವಿಲ್ಲವೆಂದು ಅಭಿಪ್ರಾಯ ಪಟ್ಟಿರುವ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನೀಡಿದ ರೂ. 3.32 ಲಕ್ಷ ರೂ. ಗಳನ್ನು ಹಿಂತಿರುಗಿಸಲಾಗಿದೆ. ಸದರಿ ಕಟ್ಟಡವನ್ನು ಕೆಡಪಿ ಹೊಸ ಕಟ್ಟಡವನ್ನು ನಿರ್ಮಾಣ ಮಾಡಲು ಜಿಲ್ಲಾ ಮಟ್ಟದ ಕರ್ನಾಟಕ ಅಭಿವೃದ್ಧಿ ಪರಿಶೀಲನಾ ಸಭೆಯಲ್ಲಿ ದಿನಾಂಕ 16-2-99ರಂದು ತೀರ್ಮಾನಿಸಿರುತ್ತದೆ. ಈ ಕಳಪೆ ಕಾಮಗಾರಿಗೆ ಕಾರಣರಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳು ತನಿಖೆ ನಡೆಸುವಂತೆ ನಿರ್ಣಯಿಸಲಾಗಿದೆ.

ಮಂಗಳೂರು ಮಹಾನಗರಾಭಿವೃದ್ಧಿ ಪ್ರಾಧಿಕಾರದಿಂದ ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಿಲ್ಪಟ್ಟ ಅರ್ಜಿಗಳ ಸಂಖ್ಯೆ.

3442(4321) ಶ್ರೀ ಯೋಗೀಶ್ ಭಟ್ ಎಸ್. (ಮಂಗಳೂರು) :— ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಭೂ ಉಪಯೋಗ ಬದಲಾವಣೆಗೆ ಸಂಬಂಧಪಟ್ಟಂತೆ ಕಳೆದ 3 ವರ್ಷಗಳಲ್ಲಿ ಮಂಗಳೂರು ಮಹಾ ನಗರಾಭಿವೃದ್ಧಿ ಪ್ರಾಧಿಕಾರದಿಂದ ಶಿಫಾರಸ್ಸು ಮಾಡಿ ನಗರ ಅಭಿವೃದ್ಧಿ ಡೈರೆಕ್ಟರ್ ಕಛೇರಿಗೆ ಹಾಗೂ ನಗರಾಭಿವೃದ್ಧಿ ಇಲಾಖೆಗಳಿಗೆ ಕಳುಹಿಸಲ್ಪಟ್ಟ ಅರ್ಜಿಗಳ ಸಂಖ್ಯೆ ಎಷ್ಟು?

ಆ) ಅವುಗಳ ಪೈಕಿ ಸರ್ಕಾರ ತೀರ್ಮಾನ ತೆಗೆದುಕೊಂಡು ಇತ್ಯರ್ಥಪಡಿಸಿದ ಅರ್ಜಿಗಳ ಸಂಖ್ಯೆ ಎಷ್ಟು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :—

ಅ) 65

ಆ) 56

ಉಡುಪಿ ಜಿಲ್ಲೆಯಾದ್ಯಂತ ನದಿಗಳಲ್ಲಿ ಸಾಂಪ್ರದಾಯಿಕ ಮರಳು ತೆಗೆಯುವುದು.

3443(4106) ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) :— ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಉಡುಪಿ ಜಿಲ್ಲೆಯಾದ್ಯಂತ ನದಿಗಳಿಂದ ಸಾಂಪ್ರದಾಯಿಕ ರೀತಿಯಲ್ಲಿ ದೋಣಿಯಿಂದ ಮರಳನ್ನು ತೆಗೆಯುವ ಬದಲಿಗೆ ಯಾಂತ್ರಿಕ ರೀತಿಯಲ್ಲಿ ಮರಳು ತೆಗೆಯುವ ತೀರ್ಮಾನ ಸರ್ಕಾರ ಕೈಗೊಂಡಿರುವುದು ನಿಜವೇ ಇದರಿಂದ ಸರ್ಕಾರಕ್ಕೆ ಆಗುವ ಪ್ರಯೋಜನವೇನು?